ಸಂಸ್ಥೆಯ ಹೆಸರು	ಸೀಟುಗಳ ಸಂಖ್ಯೆ
ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಬೀದರ್	100
ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ರಾಯಚೂರು	100
ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಶಿವಮೊಗ್ಗ	100
ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹುಬ್ಬಳ್ಳಿ	50

ಆ) ತಪಾಸಣೆಯಲ್ಲಿ ಗುರುತಿಸಿರುವಂತೆ ಸಿಬ್ಬಂದಿ ಮತ್ತು ಬೋಧನಾ ಆಸ್ಪತ್ರೆಯಲ್ಲಿ ಹಾಸಿಗೆಗಳ ಕೊರತೆ.

ಇ) ಇಲ್ಲ.

ಈ) ಕೊರತೆಗಳನ್ನು ನೀಗಿಸಲಾಗಿದೆ. ಮಾನ್ಯತೆ ಪಡೆಯಲು ಕೇಂದ್ರ ಸರ್ಕಾರದೊಂದಿಗೆ ಸಮಾಲೋಚನೆಯಲ್ಲಿದೆ.

ವೈದ್ಯಕೀಯ ಕಾಲೇಜುಗಳಲ್ಲಿ ನೇಮಕಾತಿಗಳಲ್ಲಿ ಅಕ್ರಮ

517 (343) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) :- ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:-

ಅ) ರಾಜ್ಯದಲ್ಲಿ ಹೊಸದಾಗಿ ಪ್ರಾರಂಭಗೊಂಡಿರುವ ವೈದ್ಯಕೀಯ ಕಾಲೇಜುಗಳ ಪೈಕಿ ಯಾವ ಯಾವ ಕಾಲೇಜುಗಳಲ್ಲಿ ನೇಮಕಾತಿಗಳು

ಮತ್ತು ಇತರೆ ವಿಷಯಗಳಲ್ಲಿ ಅಕ್ರಮಗಳು ಪತ್ತೆಯಾಗಿವೆ; (ಪೂರ್ಣ ವಿವರಗಳನ್ನು ಒದಗಿಸುವುದು);

ಆ) ಈ ಅಕ್ರಮ ವ್ಯವಹಾರಗಳಲ್ಲಿ ಭಾಗಿಯಾಗಿರುವವರ ವಿವರಗಳೇನು ;

ಇ) ಸರ್ಕಾರವು ಈ ವಿಷಯದಲ್ಲಿ ಕೈಗೊಂಡಿರುವ ಕ್ರಮಗಳೇನು?

ಶ್ರೀ ಎ. ಎಸ್. ರಾಮ್‌ದಾಸ್ (ವೈದ್ಯಕೀಯ ಶಿಕ್ಷಣ ಸಚಿವರು):–

ಅ) ಮಂಡ್ಯ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ

ಆ) ಮಾನ್ಯ ಲೋಕಾಯುಕ್ತರಿಂದ ತನಿಖಾ ವರದಿ ಸ್ವೀಕರಿಸಲ್ಪಟ್ಟಿದ್ದು ಪರಿಶೀಲನೆಯಲ್ಲಿದೆ.

ಇ) ಪರಿಶೀಲನೆಯಲ್ಲಿದೆ.

ಅಸಂಘಟಿತ ವಲಯದ ಕಾರ್ಮಿಕರಿಗೆ ಪಿಂಚಣಿ ಯೋಜನೆ

518 (767) ಶ್ರೀ ಭೀಮಣ್ಣ ಖಂಡ್ರೆ (ಭಾಲ್ಕಿ) :– ಮಾನ್ಯ ಕಾರ್ಮಿಕ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಜ್ಯದಲ್ಲಿ ಯಾವ ಯಾವ ಕಾರ್ಮಿಕರನ್ನು ಅಸಂಘಟಿತ ಕಾರ್ಮಿಕ ವಲಯಕ್ಕೆ ಸೇರಿಸಲಾಗಿದೆ ಮತ್ತು ಇವರಿಗೆ ಸರ್ಕಾರದಿಂದ ಯಾವ ಯಾವ ಸೌಲಭ್ಯಗಳನ್ನು ಒದಗಿಸಿಕೊಡಲಾಗುತ್ತಿದೆ;

ಆ) ಈ ಅಸಂಘಟಿತ ಕಾರ್ಮಿಕ ವಲಯಕ್ಕೆ ಸೇರಿದ ಕಾರ್ಮಿಕರನ್ನು ಪಿಂಚಣಿ ಯೋಜನೆಯ ವ್ಯಾಪ್ತಿಗೆ ತರುತ್ತಿರುವುದು ನಿಜವಲ್ಲವೇ; ಹಾಗಿದ್ದಲ್ಲಿ, ಇದಕ್ಕಾಗಿ ಇವರುಗಳು ಎಷ್ಟು ವಂತಿಗೆಯನ್ನು